ಪಿಡಬ್ಲ್ಯೂಃ1

ಇಂದು ದಿನಾಂಕಃ 18.06.2019 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿಯ ಪರ ಶ್ರೀ ಕೆ ವಿ ಬಿ ವಕೀಲರಿಂದಃ

ನಾನು ನನ್ನ ಮುಖ್ಯಿಕ ವಿಚಾರಣೆಯ ಬದಲಾಗಿ ನನ್ನ ಸಾಕ್ಷಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳನ್ನು ನಾನೇ ಖುದ್ದಾಗಿ ವಕೀಲರಿಗೆ ತಿಳಿಯಿಸಿ, ಬರೆಯಿಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ನಿಜವಿದ್ದು, ಅದರಲ್ಲಿರುವ ಸಹಿಯು ನನ್ನದೇ ಆಗಿರುತ್ತದೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಶಾನೀಕರಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

1. ದಿಃ 27-01-2018 ನೇ ಇಸ್ವಿಯ ಮೃತ್ಯು ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ -1 ಎಂದು , ಆಸ್ತಿ ನಂ. 148 ಸಿ ರ ಪಂಚಾಯತಿ ಉತಾರವನ್ನು ಹಾಜರು ಮಾಡಿದ್ದು ನಿಪಿ -2 ಎಂದು , ಆಸ್ತಿ ನಂ. 148 ಡಿ ಇದರ ಪಂಚಾಯತಿ ಉತಾರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು, ಆಸ್ತಿ ನಂ.148 ಬಿ ಇದರ ಪಂಚಾಯತಿ ಉತಾರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು, 5 ಪಹಣಿ ಪತ್ರಿಕೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ಅನುಕ್ರಮವಾಗಿ ನಿಪಿ 5 ರಿಂದ 9 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶ ಕೋರಿದ್ದು ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-xxx

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.